# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1360

ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಸಿ ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 16.03.2026

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಹೊಸದಾಗಿ ಎಪಿಎಲ್ (APL) ಪಡಿತರ ಚೀಟಿಗಳನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೊಸ ಕಾರ್ಡ್‌ಗಳ ವಿತರಣೆಯನ್ನು ಸ್ಥಗಿತಗೊಳಿಸಲು ಕಾರಣಗಳೇನು; | ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021 ದಿನಾಂಕ:29.09.2023 ರಲ್ಲಿಆದ್ಯತೇತರ ಪಡಿತರ ಚೀಟಿಯನ್ನು ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳಿಗೆ ಅನುಮೋದನೆ ನೀಡುವುದನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ. |
| ಆ | ನ್ಯಾಯಬೆಲೆ ಅಂಗಡಿಗಳಲ್ಲಿ ಹಣ ಪಾವತಿಸಿ ರೇಷನ್ ಪಡೆಯಲು ನಿರಾಸಕ್ತಿ ತೋರಿದ ಸುಮಾರು ಶೇ:80ರಷ್ಟು ಎಪಿಎಲ್ ಕಾರ್ಡ್‌ದಾರರ ಕಾರ್ಡ್‌ಗಳನ್ನು ಇಲಾಖೆಯು ರದ್ದುಗೊಳಿಸಿರುವುದು ಅಥವಾ ಡಿಲೀಟ್ ಮಾಡಿರುವುದು ನಿಜವೇ; | ಯಾವುದೇ ಎಪಿಎಲ್ ಕಾರ್ಡ್‌ದಾರರ ಕಾರ್ಡ್‌ಗಳನ್ನು ರದ್ದುಪಡಿಸಿರುವುದಿಲ್ಲ. |
| ಇ | ಎಪಿಎಲ್ ಕಾರ್ಡ್‌ಗಳ ರದ್ದತಿಯಿಂದಾಗಿ ರೈತರು ಕೃಷಿ ಪತ್ತಿನ ಬ್ಯಾಂಕ್‌ಗಳಲ್ಲಿ ಬೆಳೆ ಸಾಲ ಪಡೆಯಲು ಮತ್ತು ಯಶಸ್ವಿನಿ ಯೋಜನೆಯಡಿ ಸೌಲಭ್ಯ ಪಡೆಯಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೇಂದ್ರ ಸರ್ಕಾರದಿಂದ ಈ ಕೆಳಕಂಡ ವಿಧಗಳಲ್ಲಿ 7,76,206 ಶಂಕಾಸ್ಪದ ಪಡಿತರ ಫಲಾನುಭವಿಗಳನ್ನು ಗುರುತಿಸಲಾಗಿರುತ್ತದೆ.<br>1. CBDT Income Group Annual Income>1,20,000<br>2. GSTN Gross Turnover > 25 Lacs<br>3. MCA Individual as Director<br>4. PDS Duplicate RC Inter State<br>5. PDS Duplicate RC Intra State<br>6. PDS RC Member Above 100 Years<br>7. PDS Silent RC > 12 Months<br>8. PDS Silent RC 6-12 Months |

9. PDS Single Member Below 18 Years
10. PM KISAN Land Holding >7.5 Acres
11. UIDAI Aadhaar Status Deceased
12. Vehicle Ownership value Owning Light Motor Vehicle
13. Vehicle Ownership value Owning Medium Motor Vehicle
14. Vehicle Ownership value Owning Other than Mentioned Above.

ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.

1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.
2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟೇರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.
3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್‌ಟ್ಯಾಕ್ಸಿ ಇತ್ಯಾದಿಗಳನ್ನು

| | | |
|---|---|---|
| | | ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಸದರಿ ಮಾನದಂಡಗಳ ಆಧಾರದ ಮೇಲೆ ಅನರ್ಹವೆಂದು ಕಂಡುಬಂದ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗುತ್ತಿದೆ. |
| ಈ | 70 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಉಚಿತ ನೀಡುವ 'ಆಯುಷ್ಮಾನ್ ಭಾರತ್ ಯೋಜನೆಗೆ ಎಪಿಎಲ್ ಕಾರ್ಡ್ ಕಡ್ಡಾಯವಾಗಿದ್ದು, ಕಾರ್ಡ್‌ಗಳ ರದ್ದತಿಯಿಂದಾಗಿ ಲಕ್ಷಾಂತರ ಹಿರಿಯರು ಈ ಆರೋಗ್ಯ ಸೌಲಭ್ಯದಿಂದ ವಂಚಿತರಾಗುತ್ತಿರುವುದನ್ನು ಸರ್ಕಾರ ಹೇಗೆ ಸರಿಪಡಿಸಲಿದೆ; | ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021 ದಿನಾಂಕ:29.09.2023 ರಲ್ಲಿ ಆದ್ಯತೇತರ ಪಡಿತರ ಚೀಟಿಯನ್ನು ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳಿಗೆ ಅನುಮೋದನೆ ನೀಡುವುದನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ. |
| ಉ | ಆರ್ಥಿಕವಾಗಿ ಹಿಂದುಳಿದ ವರ್ಗದವರಿಗೆ (EWS) ನೀಡಲಾಗುವ ಶೇ.10 ರಷ್ಟು ಮೀಸಲಾತಿ ಸೌಲಭ್ಯ ಪಡೆಯಲು ಎಪಿಎಲ್ ಕಾರ್ಡ್ ಅತ್ಯಗತ್ಯವಾಗಿದ್ದು, ಕಾರ್ಡ್ ಇಲ್ಲದೆ ಈ ವರ್ಗದವರು ಶಿಕ್ಷಣ ಮತ್ತು ಉದ್ಯೋಗದಲ್ಲಿ ವಂಚಿತರಾಗುತ್ತಿರುವುದು ಸರ್ಕಾರ ಗಮನದಲ್ಲಿದೆಯೇ? | |

ಇ-ಆನಾಸ 72 ಡಿಆರ್‌ಎ 2026

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು